# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 588 |
| ಸದಸ್ಯರ ಹೆಸರು | : | ಶ್ರೀ ಕೆ.ಹರೀಶ್‌ಕುಮಾರ್. |
| ಉತ್ತರಿಸುವ ದಿನಾಂಕ | : | 23-12-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಭಿಕ್ಷಾಟನೆ ನಿಷೇಧ ಕಾಯಿದೆ ಜಾರಿಯಲ್ಲಿದೆಯೇ; | ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ, 1975 ಜಾರಿಯಲ್ಲಿರುತ್ತದೆ. |
| ಆ) | ನಗರದ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಭಿಕ್ಷಾಟನೆ ಕಾರ್ಯ ನಡೆಯುತ್ತಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ, 1975 ರ ಸೆಕ್ಷನ್ 3 ರಂತೆ ರಾಜ್ಯದಲ್ಲಿ ಭಿಕ್ಷಾಟನೆಯನ್ನು ನಿಷೇಧಿಸಲಾಗಿದ್ದು, ಸದರಿ ಅಧಿನಿಯಮದನ್ವಯ 15 ವರ್ಷ ಮೇಲ್ಪಟ್ಟ ಪುರುಷರು ಹಾಗೂ 18 ವರ್ಷ ಮೇಲ್ಪಟ್ಟ ಮಹಿಳೆಯರು ಭಿಕ್ಷಾಟನೆಯಲ್ಲಿ ತೊಡಗಿದ್ದಲ್ಲಿ ಅಂತಹ ಭಿಕ್ಷುಕರಿಗೆ ಪರಿಹಾರ ಕೇಂದ್ರಗಳಲ್ಲಿ ರಕ್ಷಣೆ ಒದಗಿಸಲಾಗುತ್ತಿದೆ.<br><br>16 ವರ್ಷಗಳಿಗಿಂತ ಕಡಿಮೆ ವಯಸ್ಸಿನ ಗಂಡು ಮಕ್ಕಳನ್ನು ಹಾಗೂ 18 ವರ್ಷಗಳಿಗಿಂತ ಕಡಿಮೆ ವಯಸ್ಸಿನ ಹೆಣ್ಣು ಮಕ್ಕಳನ್ನು ಅಧಿನಿಯಮದಲ್ಲಿ ಬಂಧಿಸಲು ಅವಕಾಶ ಕಲ್ಪಿಸಿರುವುದಿಲ್ಲ. ಸಿಗ್ನಲ್‌ಗಳಲ್ಲಿ ಭಿಕ್ಷಾಟನೆಯಲ್ಲಿ ತೊಡಗಿರುವ ಮಕ್ಕಳು ಮತ್ತು ಮಹಿಳೆಯರು ಕಂಡುಬಂದಲ್ಲಿ ಅಂತಹವರನ್ನು ಬಂಧಿಸಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ವಶಕ್ಕೆ ನೀಡಲಾಗುತ್ತಿದೆ.<br><br>ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷೆ ಬೇಡುತ್ತಿದ್ದಲ್ಲಿ ಅಂತಹವರನ್ನು ಸಾರ್ವಜನಿಕರು ರಕ್ಷಣೆ ಮಾಡಲು ಉಚಿತ ಸಹಾಯವಾಣಿ ಸಂಖ್ಯೆ: 10581 ಹಾಗೂ ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಲ್ಯಾಣ ಮಿತ್ರ ಸಂಖ್ಯೆ: 9482300400 ಗೆ ಮಾಹಿತಿ ನೀಡಿದ್ದಲ್ಲಿ, ಭಿಕ್ಷುಕರನ್ನು ರಕ್ಷಿಸಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| | | ಪ್ರಸುತ ರಾಜ್ಯದ ನಗರ ಪ್ರದೇಶಗಳಲ್ಲಿ ಭಿಕ್ಷುಕರ ಸಮಸ್ಯೆಯು ಹೆಚ್ಚಾಗಿರುವುದರಿಂದ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಭಿಕ್ಷಾಟನೆ ನಿಯಂತ್ರಣಕ್ಕಾಗಿ, ದಿನಾಂಕ: 18.07.2022 ರಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಗೃಹ ಇಲಾಖೆ ಹಾಗೂ ಕಾರ್ಮಿಕ ಇಲಾಖೆಗಳ ಸಚಿವರು ಹಾಗೂ ಈ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದ್ದು, ಬೆಂಗಳೂರು ನಗರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಲ್ಯಾಣ ಇಲಾಖೆ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಗೃಹ ಇಲಾಖೆ, ಕಾರ್ಮಿಕ ಇಲಾಖೆ, ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರ, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಹಾಗೂ ಬಿಬಿಎಂಪಿ ಗಳನ್ನೊಳಗೊಂಡ ಟಾಸ್ಕ್ ಫೋರ್ಸ್ ತಂಡಗಳನ್ನು ರಚಿಸಲು ಕ್ರಮವಹಿಸಲಾಗುತ್ತಿದೆ. ಬೆಂಗಳೂರು ನಗರದಲ್ಲಿ ನಿರಾಶ್ರಿತರ ಪರಿಹಾರ ಕೇಂದ್ರದಿಂದ ದಿನಕ್ಕೆ 03 ತಂಡಗಳಂತೆ ಭಿಕ್ಷುಕರನ್ನು ಬಂಧಿಸಲು ಕ್ರಮವಹಿಸಲಾಗುತ್ತಿದೆ. |
| ಇ) | ಮಧ್ಯವರ್ತಿಗಳು ಹೆಣ್ಣುಮಕ್ಕಳ ಮೂಲಕ ಬಾಡಿಗೆಗೆ ಮಕ್ಕಳನ್ನು ಪಡೆದು ಭಿಕ್ಷಾಟನೆಯಲ್ಲಿ ತೊಡಗಿಸುತ್ತಿರುವ ದೊಡ್ಡ ದಂಧೆಯ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ಸದರಿ ದಂಧೆಯ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:18.07.2022 ರಂದು ನಡೆದ ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಗೃಹ ಇಲಾಖೆ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಕಾರ್ಮಿಕ ಇಲಾಖೆ, ಬಿ.ಬಿ.ಎಂ.ಪಿ ಹಾಗೂ ಕೇಂದ್ರ ಪರಿಹಾರ ಸಮಿತಿಯ ಅಧಿಕಾರಿಗಳೊಂದಿಗೆ ಸಭೆಯನ್ನು ನಡೆಸಿ ಭಿಕ್ಷಾಟನೆ ಮಾಡುವ ಮಾಫಿಯಾವನ್ನು ತಡೆಗಟ್ಟಲು ಟಾಸ್ಕ್ ಫೋರ್ಸ್ ಸಮಿತಿ ರಚಿಸಿ, ಕಾರ್ಯಚರಣೆ ಮಾಡಲು ಸೂಚಿಸಿದ್ದು, ತಂಡ ರಚನೆಯಾದ ಕೂಡಲೇ ಎಲ್ಲಾ ಇಲಾಖೆಗಳ ಸಮನ್ವಯದೊಂದಿಗೆ ರಕ್ಷಣಾ ಕಾರ್ಯಚರಣೆ ನಡೆಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: SWD/30/SBR/ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು